**All India Radio: Bangalore**
**National Bulletin In Kannada**
**16.08.2025  13.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**16.08.2025  13.10 p.m.**

**<><><><>**

ಮುಖ್ಯಾಂಶಗಳು

1. ಸದ್ಯಕ್ಕೆ ಉಕ್ರೇನ್-ರಷ್ಯಾ ಕದನ ವಿರಾಮ ಇಲ್ಲ; ಡೊನಾಲ್ಡ್ ಟ್ರಂಪ್, ವ್ಲಾಡಿಮಿರ್ ಪುಟಿನ್ ಮಾಹಿತಿ
2. ದೇಶದ ಎಲ್ಲಾ ಟೋಲ್‌ಗಳಲ್ಲಿ ಫಾಸ್ಟ್ ಟ್ಯಾಗ್ ವಾರ್ಷಿಕ ಪಾಸ್ ಸೌಲಭ್ಯ ಯಶಸ್ವಿ ಜಾರಿ
3. ದೇಶಾದ್ಯಂತ ಇಂದು ಶ್ರೀಕೃ? ಜನ್ಮಾ?ಮಿ ಆಚರಣೆ; ಬಾಲಕೃಷ್ಣನ ವೇಷದಲ್ಲಿ ಕಂಗೊಳಿಸುತ್ತಿರುವ ಮಕ್ಕಳು
4. ಚೆನ್ನೈ ಗ್ರ್ಯಾಂಡ್ ಮಾಸ್ಟರ್ಸ್ ಚಾಲೆಂಜರ್ಸ್ ಕಿರೀಟ ಮುಡಿಗೇರಿಸಿಕೊಂಡ ಪ್ರಾಣೇಶ್

************

ಉಕ್ರೇನ್-ರಷ್ಯಾ ಸಂಘರ್ಷವನ್ನು ಪರಿಹರಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವೆ ಅಮೆರಿಕದ ಅಲಾಸ್ಕಾದಲ್ಲಿ ನಡೆದ ಮಾತುಕತೆಗಳು ಯಾವುದೇ ಒಪ್ಪಂದಕ್ಕೆ ಬರಲಿಲ್ಲ.ಮೂರು ಗಂಟೆಗಳ ಮಾತುಕತೆಯಲ್ಲಿ ಪ್ರಗತಿ ಸಾಧಿಸಿದ್ದೇವೆ. ಉಕ್ರೇನ್ ಯುದ್ಧವನ್ನು ಕೊನೆಗೊಳಿಸುವತ್ತ ಸಾಗುತ್ತಿದ್ದೇವೆ. ಆದರೆ ತಕ್ಷಣಕ್ಕೆ ಕದನ ವಿರಾಮ ಇಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದ್ದಾರೆ.ಸಭೆಯ ನಂತರ ನಡೆದ ಜಂಟಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಟ್ರಂಪ್, ಸಭೆಯನ್ನು ಅತ್ಯಂತ ಉತ್ಪಾದಕ ಎಂದು ಕರೆದರು. ಪುಟಿನ್ ಉತ್ಸಾಹಭರಿತರಾಗಿದ್ದರು. ಈ ಹಾದಿಯಲ್ಲಿ ಸಾಗುವುದರಿಂದ, ನಾವು ರಷ್ಯಾ-ಉಕ್ರೇನ್ ಸಂಘರ್ಷವನ್ನು ಶೀಘ್ರ ಶಮನಗೊಳಿಸಬಹುದು ಎಂದು ಹೇಳಿದರು. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಮಾತನಾಡಿ, ಉಕ್ರೇನ್‌ನೊಂದಿಗಿನ ಸಂಘರ್ಷವನ್ನು ಕೊನೆಗೊಳಿಸಲು ತಾವು ಪ್ರಾಮಾಣಿಕವಾಗಿ ಆಸಕ್ತಿ ಹೊಂದಿರುವುದಾಗಿ ಅವರು ಹೇಳಿದರು. ಸಂಘರ್ಷದ ಪ್ರಾಥಮಿಕ ಕಾರಣಗಳನ್ನು ತೊಡೆದುಹಾಕಬೇಕಾಗಿದೆ. ಮಾತುಕತೆಗಳನ್ನು ಉಕ್ರೇನ್ ಮತ್ತು ಯುರೋಪ್ ಹಾಳು ಮಾಡಬಾರದು ಎಂದು ಎಚ್ಚರಿಸಿದರು. ಅಮೆರಿಕ ಮತ್ತು ರಷ್ಯಾ ಮತ್ತಷ್ಟು ಪ್ರಗತಿಗೆ ಉತ್ತಮ ಅವಕಾಶ ಹೊಂದಿದೆ. ೨೦೨೨ ರಲ್ಲಿ ಟ್ರಂಪ್ ಅಮೆರಿಕ ಅಧ್ಯಕ್ಷರಾಗಿದ್ದರೆ, ಉಕ್ರೇನ್‌ನಲ್ಲಿ ಯುದ್ಧ

ನಡೆಯುತ್ತಿರಲಿಲ್ಲ ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿದರು. ಏತನ್ಮಧ್ಯೆ, ಕದನ ವಿರಾಮ ಘೋಷಣೆಯಾದರೆ ಉಕ್ರೇನ್‌ನಲ್ಲಿ ತನ್ನ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಬ್ರಿಟನ್ ಮತ್ತು ಅದರ ಮಿತ್ರರಾಷ್ಟ್ರಗಳು ಸೈನ್ಯವನ್ನು ನಿಯೋಜಿಸಲು ಸಿದ್ಧವಾಗಿವೆ ಎಂದು ಬ್ರಿಟನ್ ರಕ್ಷಣಾ ಕಾರ್ಯದರ್ಶಿ ತಿಳಿಸಿದ್ದಾರೆ.

**********

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ೭೯ ನೇ ಸ್ವಾತಂತ್ರ್ಯ ದಿನದಂದು ದೇಶಾದ್ಯಂತ ೧ ಸಾವಿರ ೧೫೦ ಟೋಲ್ ಪ್ಲಾಜಾಗಳಲ್ಲಿ 'ಫಾಸ್ಟ್ ಟ್ಯಾಗ್ ವಾರ್ಷಿಕ ಪಾಸ್' ಸೌಲಭ್ಯವನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ.ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಪ್ರಕಾರ, ಅನುಷ್ಠಾನದ ಮೊದಲ ದಿನದಂದು ಸಂಜೆ ೭ ಗಂಟೆಯವರೆಗೆ ಸುಮಾರು ೧ ಲಕ್ಷ ೪೦ ಸಾವಿರ ಬಳಕೆದಾರರು ವಾರ್ಷಿಕ ಪಾಸ್ ಅನ್ನು ಖರೀದಿಸಿ ಸಕ್ರಿಯಗೊಳಿಸಿದ್ದಾರೆ. ಟೋಲ್ ಪ್ಲಾಜಾಗಳಲ್ಲಿ ಸುಮಾರು ೧ ಲಕ್ಷ ೪೦ ಸಾವಿರ ವಹಿವಾಟುಗಳನ್ನು ದಾಖಲಿಸಲಾಗಿದೆ.ಪಾಸ್ ಬಳಕೆದಾರರಿಗೆ ಸುಗಮ ಪ್ರಯಾಣದ ಅನುಭವವನ್ನು ಖಚಿತಪಡಿಸಿಕೊಳ್ಳಲು ಪ್ರತಿ ಟೋಲ್ ಪ್ಲಾಜಾದಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಮತ್ತು ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.ಒಮ್ಮೆಗೆ ೩ ಸಾವಿರ ರೂಪಾಯಿ ಶುಲ್ಕ ಪಾವತಿಯ ಮೂಲಕ ಆಗಾಗ್ಗೆ ಫಾಸ್ಟ್ ಟ್ಯಾಗ್ ಅನ್ನು ರೀಚಾರ್ಜ್ ಮಾಡುವ ಅಗತ್ಯವನ್ನು ತೆಗೆದುಹಾಕುವ ಉದ್ದೇಶದಿಂದ ಫಾಸ್ಟ್ ಟ್ಯಾಗ್ ವಾರ್ಷಿಕ ಪಾಸ್ ಅನ್ನು ಪ್ರಾರಂಭಿಸಲಾಗಿದೆ.

*************

ಶ್ರೀಕೃಷ್ಣ ಜನ್ಮೋತ್ಸವವಾದ ಅಂಗವಾಗಿ ಜನ್ಮಾಷ್ಟಮಿಯನ್ನು ಇಂದು ದೇಶಾದ್ಯಂತ ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಲಾಗುತ್ತಿದೆ. ಶ್ರೀಕೃಷ್ಣನಿಗೆ ಪ್ರಾರ್ಥನೆ ಸಲ್ಲಿಸಲು ಭಕ್ತರು ದೇವಾಲಯಗಳಿಗೆ ತೆರಳುತ್ತಿದ್ದಾರೆ. ಉತ್ತರ ಪ್ರದೇಶದ ಮಥುರಾ ಮತ್ತು ವೃಂದಾವನವು ಶ್ರೀಕೃಷ್ಣನ ಜನ್ಮ ದಿನವನ್ನು ಆಚರಿಸಲು ಸಂಪೂರ್ಣವಾಗಿ ಸಜ್ಜಾಗಿದೆ. ಶ್ರೀಕೃಷ್ಣನ ಜನ್ಮಸ್ಥಳವಾದ ಮಥುರಾದಲ್ಲಿ, ಬಂಕೆ ಬಿಹಾರಿ ದೇವಸ್ಥಾನ, ಪ್ರೇಮ್ ಮಂದಿರ, ಇಸ್ಕಾನ್ ದೇವಸ್ಥಾನ ಮತ್ತು ಶ್ರೀಕೃಷ್ಣ ಜನ್ಮ ಭೂಮಿ ದೇವಸ್ಥಾನವನ್ನು ಸುಂದರವಾಗಿ ಅಲಂಕರಿಸಲಾಗಿದೆ. ಬಾಲಕೃಷ್ಣನ ವೇಷದಲ್ಲಿ ಮಕ್ಕಳು ಕಂಗೊಳಿಸುತ್ತಿದ್ದಾರೆ. ಶ್ರೀಕೃಷ್ಣ ಜನ್ಮಾಷ್ಟಮಿಯ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶುಭಾಶಯ ಕೋರಿದ್ದಾರೆ. ಜನ್ಮಾಷ್ಟಮಿಯ ತಮ್ಮ ಸಂದೇಶದಲ್ಲಿ ರಾಷ್ಟ್ರಪತಿಗಳು, ಇದು ಅತ್ಯಂತ ಸಂತೋಷ ಮತ್ತು ಉತ್ಸಾಹದಿಂದ ತುಂಬಿದ ಹಬ್ಬ ಎಂದು

ಹೇಳಿದ್ದಾರೆ. ಭಗವಾನ್ ಶ್ರೀಕೃಷ್ಣನ ಜೀವನ ಮತ್ತು ಬೋಧನೆಗಳು ಜನರನ್ನು ಸ್ವಯಂ ಅಭಿವೃದ್ಧಿ ಮತ್ತು ಸ್ವಯಂ ಸಾಕ್ಷಾತ್ಕಾರದ ಕಡೆಗೆ ಪ್ರೇರೇಪಿಸುತ್ತವೆ. ಭಗವಾನ್ ಶ್ರೀಕೃ?ನು ಧರ್ಮದ ಮಾರ್ಗವನ್ನು ಅನುಸರಿಸುವ ಮೂಲಕ ಅಂತಿಮವಾಗಿ ಸತ್ಯವನ್ನು ಸಾಧಿಸುವ ಬಗ್ಗೆ ಮಾನವೀಯತೆಯನ್ನು ಪ್ರಬುದ್ಧಗೊಳಿಸಿದರು ಎಂದು ಅವರು ಹೇಳಿದ್ದಾರೆ. ಶ್ರೀ ಕೃಷ್ಣನು ಸಾಕಾರಗೊಳಿಸಿದ ಶಾಶ್ವತ ಮೌಲ್ಯಗಳನ್ನು ಅಳವಡಿಸಿಕೊಳ್ಳಲು ಈ ಹಬ್ಬವು ಜನರನ್ನು ಪ್ರೇರೇಪಿಸುತ್ತದೆ ಎಂದು ರಾಷ್ಟ್ರಪತಿಗಳು ಹೇಳಿದ್ದಾರೆ.ಪ್ರದಾನಮಂತ್ರಿ ನರೇಂದ್ರ ಮೋದಿ ಅವರು ಎಲ್ಲಾ ದೇಶವಾಸಿಗಳಿಗೆ ಜನ್ಮಾಷ್ಟಮಿಯ ಶುಭಾಶಯಗಳನ್ನು ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ನಂಬಿಕೆ, ಸಂತೋಷ ಮತ್ತು ಉತ್ಸಾಹದ ಪವಿತ್ರ ಹಬ್ಬವು ಜನರ ಜೀವನದಲ್ಲಿ ಹೊಸ ಶಕ್ತಿ ಮತ್ತು ಉತ್ಸಾಹವನ್ನು ತುಂಬಲಿ ಎಂದು ಆಶಿಸಿದ್ದಾರೆ.

*************

ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯ ಚಿಸೋಟಿ ಗ್ರಾಮದಲ್ಲಿ ಮೇಘಸ್ಫೋಟ ಸಂಭವಿಸಿದ್ದು, ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆ ಭರದಿಂದ ಸಾಗಿದೆ.ಭಾರತೀಯ ಸೇನೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ-ಎನ್‌ಡಿಆರ್‌ಎಫ್, ರಾಜ್ಯ ವಿಪತ್ತು ನಿರ್ವಹಣಾ ಪಡೆ-ಎಸ್‌ಡಿಆರ್‌ಎಫ್, ಪೊಲೀಸ್ ಮತ್ತು ಸ್ಥಳೀಯ ಆಡಳಿತ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದೆ. ಜಮ್ಮು ಮತ್ತು ಉಧಂಪುರದಲ್ಲಿ ಎರಡು ಎಂಐ-೧೭ ಹೆಲಿಕಾಪ್ಟರ್‌ಗಳು ಮತ್ತು ಒಂದು ಅಡ್ವಾನ್ಸ್ಡ್ ಲೈಟ್ ಹೆಲಿಕಾಪ್ಟರ್ ಅನ್ನು ನಿಯೋಜಿಸಲು ಸಿದ್ಧವಾಗಿ ಇರಿಸಲಾಗಿದೆ. ಮೇಘಸ್ಫೋಟದಿಂದ ಉಂಟಾದ ಹಠಾತ್ ಪ್ರವಾಹದಲ್ಲಿ ೬೦ ಜನರು ಸಾವನ್ನಪ್ಪಿದ್ದು, ೧೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದು, ಅನೇಕರು ಕಾಣೆಯಾಗಿದ್ದಾರೆ.

**************

೧೯೯೯ ರ ಅಕ್ಟೋಬರ್‌ನಲ್ಲಿ ಸೌದಿ ಅರೇಬಿಯಾದಲ್ಲಿ ಕೊಲೆ ಮಾಡಿ, ೨೬ ವರ್ಷಗಳ ಕಾಲ ತಲೆಮರೆಸಿಕೊಂಡಿದ್ದ ಆರೋಪಿ ಮೊಹಮ್ಮದ್ ದಿಲ್ಶಾದ್‌ನನ್ನು ಕೇಂದ್ರ ತನಿಖಾ ದಳ ಬಂಧಿಸಿದೆ.ಸೌದಿ ಅರೇಬಿಯಾ ಅಧಿಕಾರಿಗಳ ಕೋರಿಕೆಯ ಮೇರೆಗೆ ಸಿಬಿಐ, ೨೦೨೨ ರ ಏಪ್ರಿಲ್‌ನಲ್ಲಿ ಪ್ರಕರಣವನ್ನು ದಾಖಲಿಸಿತ್ತು. ಆರೋಪಿ ಮೊಹಮ್ಮದ್ ದಿಲ್ಶಾದ್ ಸೌದಿ ಅರೇಬಿಯಾದ ರಿಯಾದ್‌ನಲ್ಲಿ ಹೆವಿ ಮೋಟಾರ್ ಮೆಕ್ಯಾನಿಕ್ ಮತ್ತು ಸೆಕ್ಯುರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ. ವ್ಯಕ್ತಿಯೊಬ್ಬರನ್ನು ಕೊಲೆ ಮಾಡಿರುವ ಆರೋಪ ಆತನ ಮೇಲಿದೆ.ನವದೆಹಲಿಯ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಆತನನ್ನು ಬಂಧಿಸಲಾಗಿದೆ ಎಂದು ಸಿಬಿಐ ಅಧಿಕಾರಿಗಳು ತಿಳಿಸಿದ್ದಾರೆ.

*********

ಯಶಸ್ವಿ ಬಾಹ್ಯಾಕಾಶ ಯಾತ್ರೆಯ ನಂತರ, ಅಮೆರಿಕದಲ್ಲಿ ವಾರಗಳ ಪುನರ್ವಸತಿ ಬಳಿಕ, ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಭಾರತಕ್ಕೆ ಹಿಂದಿರುಗುವ ಬಗ್ಗೆ ಘೋಷಿಸಿದ್ದಾರೆ. ಅವರು ನಾಳೆ ಭಾರತಕ್ಕೆ ಆಗಮಿಸುವ ನಿರೀಕ್ಷೆಯಿದೆ.

ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಶುಭಾಂಶು ಶುಕ್ಲಾ, ಎಲ್ಲಾ ಸ್ನೇಹಿತರು, ಕುಟುಂಬ ಮತ್ತು ದೇಶದ ಪ್ರತಿಯೊಬ್ಬರನ್ನು ಬಾಹ್ಯಾಕಾಶ ಯಾತ್ರೆಯ ನಂತರ ಮೊದಲ ಬಾರಿಗೆ ಭೇಟಿಯಾಗಲು ಉತ್ಸುಕನಾಗಿದ್ದೇನೆ. ಜೀವನ ಎಂದರೆ ಇದೇ ಎಂದು ಭಾವಿಸುತ್ತೇನೆ - ಎಲ್ಲವೂ ಒಂದೇ ಬಾರಿಗೆ ಎಂದು ಅವರು ಹೇಳಿದ್ದಾರೆ.ಈ ವರ್ಷದ ಜೂನ್‌ನಲ್ಲಿ, ಶುಕ್ಲಾ ಅವರು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣ ತಲುಪಿದ ಮೊದಲ ಭಾರತೀಯರಾದ್ದಾರೆ. ೧೮ ದಿನಗಳ ಕಾರ್ಯಾಚರಣೆಯ ನಂತರ ಅವರು ಜುಲೈ ೧೫ ರಂದು ಹಿಂದಿರುಗಿದ್ದರು.

***************

ಮೇಘಸ್ಫೋಟ ಸಂಭವಿಸಿದ ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯ ಚಿಸೋಟಿ ಗ್ರಾಮಕ್ಕೆ ಜಮ್ಮು-ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಇಂದು ಭೇಟಿ ನೀಡಿ, ದಿಢೀರ್ ಪ್ರವಾಹದಿಂದ ಉಂಟಾದ ಹಾನಿಯನ್ನು ಪರಿಶೀಲಿಸಿದರು. ಬಳಿಕ ಅವರು ಸ್ಥಳೀಯರೊಂದಿಗೆ ಸಂವಾದ ನಡೆಸಿದರು. ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ನಡೆಸುತ್ತಿರುವ ಹಿರಿಯ ಸೇನಾ ಅಧಿಕಾರಿಯೊಬ್ಬರು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.
ಈ ಕುರಿತು ಒಂದು ವಿಶೇಷ ವರದಿ...

**ಧ್ವನಿ: ಚೇತನ್ (೩೭ ಸೆಕೆಂಡ್‌ಗಳು)**

***********

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಪುಣ್ಯತಿಥಿಯಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ, ದೆಹಲಿಯಲ್ಲಿರುವ ವಾಜಪೇಯಿ ಅವರ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು. ಬಿಜೆಪಿಯ ದಿಗ್ಗಜ ಅಟಲ್ ಬಿಹಾರಿ ವಾಜಪೇಯಿ ೨೦೧೮ ರಲ್ಲಿ ಈ ದಿನದಂದು ನಿಧನರಾಗಿದ್ದರು.ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಜೆ.ಪಿ.ನಡ್ಡಾ, ಕಿರಣ್ ರಿಜಿಜು, ಗಜೇಂದ್ರ ಸಿಂಗ್ ಶೇಖಾವತ್, ಲೋಕಸಭಾಧ್ಯಕ್ಷ ಓಂ ಬಿರ್ಲಾ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಕೂಡ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಿದರು.ಅಟಲ್ ಬಿಹಾರಿ ವಾಜಪೇಯಿ ಮೂರು ಬಾರಿ ಪ್ರಧಾನಿಯಾಗಿ ಸೇವೆ ಸಲ್ಲಿಸಿದರು. ೧೯೯೬ ರಲ್ಲಿ ಅವರ ಮೊದಲ ಅವಧಿ ಕೇವಲ ೧೩ ದಿನಗಳು. ಅವರು ೧೯೯೮ ರಿಂದ ೧೯೯೯ ರವರೆಗೆ ಹನ್ನೊಂದು ತಿಂಗಳ

ಅವಧಿಗೆ ಮತ್ತು ನಂತರ ೧೯೯೯ ರಿಂದ ೨೦೦೪ ರವರೆಗೆ ತಮ್ಮ ಎರಡನೇ ಅವಧಿಗೆ ಪ್ರಧಾನಿಯಾಗಿ ಸೇವೆ ಸಲ್ಲಿಸಿದರು.ಅವರಿಗೆ ೨೦೧೫ ರಲ್ಲಿ ಭಾರತದ ಅತ್ಯುನ್ನತ ನಾಗರಿಕ ಗೌರವ - ಭಾರತ ರತ್ನ - ನೀಡಲಾಯಿತು.

************

ಚೆಸ್‌ನಲ್ಲಿ, ಭಾರತೀಯ ಗ್ರ್ಯಾಂಡ್ ಮಾಸ್ಟರ್ ಎಂ.ಪ್ರಾಣೇಶ್ ಅವರು ಚೆನ್ನೈ ಗ್ರ್ಯಾಂಡ್ ಮಾಸ್ಟರ್ಸ್ ೨೦೨೫ ರಲ್ಲಿ ಚಾಲೆಂಜರ್ಸ್ ಕಿರೀಟವನ್ನು ಮುಡಿಗೇರಿಸಿಕೊಂಡರು. ಇದೇ ವೇಳೆ ಮುಂದಿನ ವರ್ಷ ಮಾಸ್ಟರ್ಸ್ ವಿಭಾಗದಲ್ಲಿ ಸ್ಪರ್ಧಿಸುವ ಅವಕಾಶವನ್ನು ಗಳಿಸಿದರು. ಜರ್ಮನಿಯ ವಿನ್ಸೆಂಟ್ ಕೀಮರ್ ನಿನ್ನೆ ಮಾಸ್ಟರ್ಸ್ ವಿಭಾಗದ ಅಂತಿಮ ಸುತ್ತಿನಲ್ಲಿ ಅಮೆರಿಕದ ಗ್ರ್ಯಾಂಡ್ ಮಾಸ್ಟರ್ ರೇ ರಾಬ್ಸನ್ ವಿರುದ್ಧ ಭರ್ಜರಿ ಜಯ ಸಾಧಿಸುವ ಮೂಲಕ ಪಂದ್ಯಾವಳಿಯಲ್ಲಿ ಸ್ಮರಣೀಯ ವಿಜಯವನ್ನು ಸಾಧಿಸಿದರು.

************

ಎರಡು ಬಾರಿ ಒಲಿಂಪಿಕ್ ಪದಕ ವಿಜೇತೆ ಮನು ಭಾಕರ್, ಇಂದು ಆರಂಭವಾಗಿ ಆಗಸ್ಟ್ ૩೦ ರಂದು ಕಝಾಕಿಸ್ತಾನದ ಶಿಮ್ಕೆಂಟ್ ಶೂಟಿಂಗ್ ಪ್ಲಾಜಾದಲ್ಲಿ ಮುಕ್ತಾಯಗೊಳ್ಳುವ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್-೨೦೨೫ ರಲ್ಲಿ ಭಾರತದ ಅಭಿಯಾನವನ್ನು ಮುನ್ನಡೆಸಲಿದ್ದಾರೆ. ೨೮ ದೇಶಗಳಿಂದ ೭೩೪ ಶೂಟರ್‌ಗಳು ಇದರಲ್ಲಿ ಸ್ಪರ್ಧಿಸಲಿದ್ದಾರೆ. ಸೀನಿಯರ್ ಮತ್ತು ಜೂನಿಯರ್ ಸ್ಪರ್ಧೆಗಳಲ್ಲಿ ೧೬೪ ಶೂಟರ್‌ಗಳನ್ನು ಒಳಗೊಂಡ ಅತಿದೊಡ್ಡ ತಂಡ ಭಾರತವನ್ನು ಪ್ರತಿನಿಧಿಸಲಿದೆ. ಏಷ್ಯನ್ ಸ್ಪರ್ಧೆಗಾಗಿ ಭಾರತೀಯ ಸೀನಿಯರ್ ಶೂಟಿಂಗ್ ತಂಡವು ೧೫ ಸ್ಪರ್ಧೆಗಳಲ್ಲಿ ಪದಕಗಳಿಗಾಗಿ ಸ್ಪರ್ಧಿಸುವ ૩೫ ಸದಸ್ಯರನ್ನು ಒಳಗೊಂಡಿದೆ. ಭಾರತೀಯ ಶೂಟರ್‌ಗಳು ಜೂನಿಯರ್ ಸ್ಪರ್ಧೆಗಳಲ್ಲಿಯೂ ಸ್ಪರ್ಧಿಸಲಿದ್ದಾರೆ.ಮನು ಭಾಕರ್ ಮಹಿಳೆಯರ ೧೦ ಮೀಟರ್ ಏರ್ ಪಿಸ್ತೂಲ್ ಮತ್ತು ೨೫ ಮೀಟರ್ ಪಿಸ್ತೂಲ್ ಸ್ಪರ್ಧೆಗಳಲ್ಲಿ ಸ್ಪರ್ಧಿಸಲಿದ್ದಾರೆ.ಒಲಿಂಪಿಯನ್‌ಗಳಾದ ರೈಜಾ ಧಿಲ್ಲೋನ್, ಅಂಜುಮ್ ಮೌದ್ಗಿಲ್, ಐಶ್ವರ್ಯ ಪ್ರತಾಪ್ ಸಿಂಗ್ ತೋಮರ್, ಸಿಫ್ಟ್ ಕೌರ್ ಸಮ್ರಾ, ರುದ್ರಾಂಕ್ಷ್ ಪಾಟೀಲ್ ಮತ್ತು ಕೈನಾನ್ ಚೆನ್ನೈ ಸಹ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

*************

ಕೊಂಕಣ ಮತ್ತು ಗೋವಾದಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಅಸ್ಸಾಂ, ಮೇಘಾಲಯ, ಉತ್ತರಾಖಂಡ, ಮಹಾರಾಷ್ಟ್ರ, ತೆಲಂಗಾಣ, ಪಶ್ಚಿಮ ಮಧ್ಯಪ್ರದೇಶ ಮತ್ತು ಗುಜರಾತ್‌ನ ಪ್ರತ್ಯೇಕ

ಸ್ಥಳಗಳಲ್ಲಿ ಇಂದು ತೀವ್ರ ಮಳೆಯಾಗುವ ನಿರೀಕ್ಷೆ ಇದೆ. ಅರುಣಾಚಲ ಪ್ರದೇಶ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರ, ಛತ್ತೀಸ್‌ಗಢ, ಆಂಧ್ರಪ್ರದೇಶದ ಕರಾವಳಿ, ಕರ್ನಾಟಕ, ಕೇರಳ, ಮಾಹೆ ಮತ್ತು ಮರಾಠವಾಡದಲ್ಲೂ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಪೂರ್ವ ಮಧ್ಯಪ್ರದೇಶ, ಪೂರ್ವ ರಾಜಸ್ಥಾನ, ಹರಿಯಾಣ, ಚಂಡೀಗಢ, ಹಿಮಾಚಲ ಪ್ರದೇಶ, ಪಂಜಾಬ್, ಸೌರಾಷ್ಟ್ರ, ವಿದರ್ಭ ಮತ್ತು ಪಶ್ಚಿಮ ಉತ್ತರ ಪ್ರದೇಶದಲ್ಲೂ ತೀವ್ರ ಮಳೆಯಾಗುವ ನಿರೀಕ್ಷೆ ಇದೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳಲ್ಲಿ ಗುಡುಗು ಸಹಿತ ಮಳೆಯಾಗುವ ಮುನ್ಸೂಚನೆ ಇದೆ. ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

*************

ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು.